**ದಿನಾಂಕಃ 04.11.2025 ರಂದು ಸಾಕ್ಷಿದಾರರು ಹಾಜರಿದ್ದು ಸಾಕ್ಷಿಗೆ ಸತ್ಯ ಪ್ರತಿಜ್ಞೆ ಮಾಡಿಸಲಾಯಿತು.**

**ಪಾಟೀ–ಸವಾಲುಃ ಪ್ರತಿವಾದಿ ಪರ ಶ್ರೀ ಸಿ.ಕೆ. ವಕೀಲರಿಂದಃ–**

1. ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿರುವ ಎಲ್ಲಾ ವಿಚಾರಗಳು ನನಗೆ ಗೊತ್ತು. ನಾನು ನನ್ನ ಮುಖ್ಯ ವಿಚಾರಣೆಯಲ್ಲಿ ಹೇಳಿರುವ ರಸ್ತೆ ಗ್ರಾಮ ನಕಾಶೆಯಲ್ಲಿಯೂ ಸಹ ಇದೆ ಎಂದರೆ ಸರಿ. ಸದರಿ ರಸ್ತೆಯು ಕೋಡಿಹಳ್ಳಿಯಿಂದ ವೇಣುಕಲ್ಲುಗುಡ್ಡ ಗ್ರಾಮಕ್ಕೆ ಹೋಗುತ್ತದೆ ಎಂದರೆ ಸರಿ. ಸದರಿ ರಸ್ತೆ ಮುಂದೆ ಕೋಡಿಹಳ್ಳಿ, ವೇಣುಕಲ್ಲುಗುಡ್ಡವನ್ನು ಸಂಪರ್ಕಿಸುವ ಏಕೈಕ ರಸ್ತೆ ಎಂದರೆ ಸಾಕ್ಷಿಯು ಬೇರೆ ರಸ್ತೆ ಸಹ ಇದೆ ಎಂದು ನುಡಿಯುತ್ತಾರೆ.

2. ಸದರಿ ರಸ್ತೆಯು ನಮ್ಮ ಜಮೀನಿನಲ್ಲಿ ಸುಮಾರು 40 ಮೀಟರ್ ಅಳತೆಯಷ್ಟು ಹಾದು ಹೋಗುತ್ತದೆ. ಸದರಿ ರಸ್ತೆಯು ಬಹಳ ವರ್ಷಗಳಿಂದ ಇದೆ ಎಂದರೆ ಸರಿಯಲ್ಲ. ನನ್ನ ತಾತ ದಾವಾ ಸ್ವತ್ತನ್ನು ಖರೀದಿ ಮಾಡಿದ ದಿನದಿಂದಲೂ ಸದರಿ ರಸ್ತೆ ಇದೆ ಎಂದರೆ ಸರಿಯಲ್ಲ. ದಾವಾ ಸ್ವತ್ತಿನಲ್ಲಿರುವ ರಸ್ತೆಯು ಸುಮಾರು 6–7 ಅಡಿ ಅಗಲ ಇದೆ. ಸದರಿ ರಸ್ತೆಯಲ್ಲಿ ಎಲ್ಲಾ ರೀತಿಯ ವಾಹನಗಳು ಓಡಾಡುತ್ತವೆ ಎಂದರೆ ಸರಿಯಲ್ಲ. ಸದರಿ ರಸ್ತೆಯಲ್ಲಿ ರೂಟ್ ಬಸ್ ಅಡ್ಡಾಡುತ್ತಿದೆ ಎಂದರೆ ಸಾಕ್ಷಿಯು ಈಗ ಅಡ್ಡಾಡುತ್ತಿದೆ ಎಂದು ನುಡಿಯುತ್ತಾರೆ. ಸದರಿ ಬಸ್ ಯಾವ ಊರಿನಿಂದ ಯಾವ ಊರಿಗೆ ಚಲಿಸುತ್ತದೆ ಎಂದು ನನಗೆ ಗೊತ್ತಿಲ್ಲ. ಸದರಿ ರಸ್ತೆಯಲ್ಲಿ ಸಾರ್ವಜನಿಕರು ಓಡಾಡುತ್ತಾರೆ ಎಂದರೆ ಸಾಕ್ಷಿಯು ಎರಡೂ ರಸ್ತೆಯಲ್ಲಿಯೂ ಓಡಾಡುತ್ತಾರೆ ಎಂದು ನುಡಿಯುತ್ತಾರೆ.

3. ದಾವಾ ಸ್ವತ್ತು ರಸ್ತೆಯ ಸಮೀಪ ಸರ್ಕಾರಿ ಆಸ್ಪತ್ರೆ ಮತ್ತು ಪ್ರೌಢಶಾಲೆ ಇದೆ ಎಂದರೆ ಸರಿಯಲ್ಲ. ಸದರಿ ಆಸ್ಪತ್ರೆ ಮತ್ತು ಶಾಲೆಗೆ ಬರುವ ಸಾರ್ವಜನಿಕರು ದಾವಾ ಸ್ವತ್ತಿನ ರಸ್ತೆಯನ್ನೇ ಉಪಯೋಗಿಸುತ್ತಾರೆ ಎಂದರೆ ಸರಿಯಲ್ಲ. ದಾವಾ ಸ್ವತ್ತಿನಲ್ಲಿರುವ ರಸ್ತೆಯನ್ನು ಸರ್ಕಾರವೇ ನಿರ್ವಹಣೆ ಮಾಡುತ್ತಿದೆ ಎಂದರೆ ಸರಿಯಲ್ಲ. ದಾವಾ ಸ್ವತ್ತಿನಲ್ಲಿರುವ ರಸ್ತೆ ಸುಮಾರು 100 ಅಡಿ ಇದೆ ಎಂದರೆ

ಸರಿಯಲ್ಲ. ದಾವಾ ಸ್ವತ್ತಿನಲ್ಲಿರುವ ರಸ್ತೆಯಲ್ಲಿ ನನಗೆ ಯಾವುದೇ ಹಕ್ಕು ಮತ್ತು ಸ್ವಾಧೀನ ಇಲ್ಲ ಎಂದರೆ ಸರಿಯಲ್ಲ. ಪಂಚಾಯಿತಿಯವರು ಸದರಿ ರಸ್ತೆಯನ್ನು ದುರಸ್ಥಿಪಡಿಸಲು ನಾನು ತೊಂದರೆ ನೀಡುತ್ತಿದ್ದೇನೆ ಎಂದರೆ ಸರಿಯಲ್ಲ. ಸದರಿ ರಸ್ತೆಯ ಜಾಗವನ್ನು ಲಪಟಾಯಿಸುವ ಉದ್ದೇಶದಿಂದ ಸುಳ್ಳು ದಾವೆ ಸಲ್ಲಿಸಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ: ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಮುಕ್ತ ಹೇಳಿಕೆ ಮತ್ತು ನನ್ನ ಉಕ್ತ ಲೇಖನಕ್ಕೆ ತಕ್ಕಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಹಿರಿಯೂರು.